ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ

ಒನಕೆ ಓಬವ್ವ ವೃತ್ತ,
ಚಿತ್ರದುರ್ಗ

Phone No: 08194-222811, 22538
ಫ್ಯಾಕ್ಸ್ ಸಂಖ್ಯೆ: 08194-224355

ಪತ್ರ ಸಂಖ್ಯೆ:ಜಿ.ತಂ.ನಿ.ಕೋ/ಚಿ/ /2020-21 ದಿನಾಂಕ:-16/04/2020

## ::ಕಛೇರಿ ಆದೇಶ::

ವಿಷಯ:- ಕೋವಿಡ್-19 ವೈರಸ್‌ನಿಂದ ಸಂಭವಿಸಬಹುದಾದ ಅನಾಹುತಗಳನ್ನು ತಡೆಗಟ್ಟಲು ಪಾನ್‌ಮಸಾಲ ಮತ್ತು ತಂಬಾಕು ಉತ್ಪನ್ನಗಳ ಮಾರಾಟ ಮತ್ತು ಬಳಕೆ ನಿಷೇಧ ಮಾಡುವ ಕುರಿತು.

ಉಲ್ಲೇಖ:- 1. ಅಧೀನ ಕಾರ್ಯದರ್ಶಿಗಳು, ಭಾರತ ಸರ್ಕಾರ, ದೆಹಲಿ, ಇವರ ಪತ್ರದ Z.21020/19/2020-TC, ದಿನಾಂಕ: 10-04-2020.

2. ಜಂಟಿ ನಿರ್ದೇಶಕರು (ವೈ) ಹಾಗೂ ಸದಸ್ಯ ಕಾರ್ಯದರ್ಶಿಗಳು, ರಾಜ್ಯ ತಂಬಾಕು ನಿಯಂತ್ರಣ ಘಟಕ, ಬೆಂಗಳೂರು. ಇವರ ಮಿಂಚಂಚೆಯ ದಿನಾಂಕ: 10-04-2020.

******

ಈ ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕೋವಿಡ್-19 ರೋಗವು ವಿಶ್ವದೆಲ್ಲೆಡೆ ವ್ಯಾಪಕವಾಗಿ ಹರಡುತ್ತಿದ್ದು, ಉಲ್ಲೇಖ (1&2)ರನ್ವಯ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಹಾಗೂ ಪಾನ್ ಮಸಾಲ, ಜರ್ದಾ, ಖೈನಿ, ಇತ್ಯಾದಿ ಬಳಕೆ ಮಾಡಿ ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುವುದು ಜೊತೆಗೆ ಸಾಂಕ್ರಾಮಿಕ ರೋಗಗಳಾದ ಕ್ಷಯರೋಗ, ನ್ಯುಮೋನಿಯ ಮತ್ತು ಕೋವಿಡ್-19 ವೈರಸ್ ಒಬ್ಬರಿಂದ ಮತ್ತೊಬ್ಬರಿಗೆ ಹರಡಲು ಕಾರಣವಾಗಬಹುದು. ಬೀಡಿ, ಸಿಗರೇಟ್ ಸೇದುವುದರಿಂದ ಕೈಯಿಂದ ಬಾಯಿಗೆ ವೈರಸ್‌ಗಳು ಮಾನವನ ದೇಹವನ್ನು ಪ್ರವೇಶಿಸುವ ಸಾಧ್ಯತೆ ಇರುವುದರಿಂದ ಹಾಗೂ ದೇಹದ ಇತರೆ ಭಾಗಗಳಿಗೆ ಸೋಂಕು ಹರಡಿ ಶ್ವಾಸಕೋಶ, ಹೃದಯ ಸಂಬಂಧಿತ ಕಾಯಿಲೆಗಳು ಬರಬಹುದು.

ಈ ಮೇಲೆ ವಿವರಿಸಿದಂತೆ ಕೋವಿಡ್-19 ಸೋಂಕಿತರು ಜಗಿಯುವ ಪಾನ್‌ಮಸಾಲ, ತಂಬಾಕು ಹಾಗೂ ತಂಬಾಕು ಉತ್ಪನ್ನಗಳನ್ನು ಬಳಸಿ ಉಗುಳುವುದರಿಂದ ಒಬ್ಬರಿಂದ ಇನ್ನೊಬ್ಬರಿಗೆ ಕೋವಿಡ್-19 ವೈರಸ್ ಹರಡುವ ಬೀತಿ ಇರುತ್ತದೆ. ಆದ್ದರಿಂದ ಸಾರ್ವಜನಿಕರ ಆರೋಗ್ಯ ಹಿತ ದೃಷ್ಟಿಯಿಂದ **ಮುಂದಿನ ಆದೇಶದವರೆಗೂ ತಂಬಾಕು ಹಾಗೂ ಪಾನ್ ಮಸಾಲ, ಜರ್ದಾ, ಖೈನಿ, ಉತ್ಪನ್ನಗಳನ್ನು, "ಚಿತ್ರದುರ್ಗ ಜಿಲ್ಲೆಯಾದ್ಯಂತ ಅಂಗಡಿಗಳಲ್ಲಿ ಮಾರಾಟ ಮಾಡುವುದು ಮತ್ತು ಸಾರ್ವಜನಿಕರು ಬಳಸುವುದನ್ನು ನಿಷೇಧಿಸಲಾಗಿದೆ".** ಒಂದು ವೇಳೆ ಉಲ್ಲಂಘನೆಯಾದಲ್ಲಿ **ಸಾಂಕ್ರಾಮಿಕ ರೋಗಗಳ ಕಾಯಿದೆ-1897, ವಿಪತ್ತು ನಿರ್ವಹಣಾ ಕಾಯಿದೆ-2005,** ಐಪಿಸಿ-**188,268,269 ಮತ್ತು 270** ಸಿಆರ್‌ಪಿಸಿ ಅಡಿಯಲ್ಲಿ ಪ್ರಕರಣ ದಾಖಲಿಸಿ **ಸಂಬಂಧಿಸಿದವರ ಮೇಲೆ ಶಿಸ್ತು ಕ್ರಮ** ಜರುಗಿಸಲಾಗುವುದು ಎಂದು ಆದೇಶಿಸಿದೆ.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು,
ಜಿಲ್ಲಾ ತಂಬಾಕು ನಿಯಂತ್ರಣ ಸಮನ್ವಯ ಸಮಿತಿ,
ಚಿತ್ರದುರ್ಗ.

DSO.

ಪ್ರತಿಯನ್ನು:-

ಜಿಲ್ಲೆರವರ ಮಾಹಿತಿಗಾಗಿ ಸಲ್ಲಿಸಿದೆ.

1. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಜಿಲ್ಲೆರವರ ಮಾಹಿತಿಗಾಗಿ ಸಲ್ಲಿಸಿದೆ.
2. ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು, ಚಿತ್ರದುರ್ಗ ರವರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
3. ಜಂಟಿ ನಿರ್ದೇಶಕರು (ವೈ) ಮತ್ತು ಸದಸ್ಯ ಕಾರ್ಯದರ್ಶಿಗಳು, ರಾಜ್ಯ ತಂಬಾಕು ನಿಯಂತ್ರಣ ಕೋಶ, ಆರೋಗ್ಯ ಮತ್ತು ಕು.ಕ.ಸೇವೆಗಳ ನಿರ್ದೇಶನಾಲಯ, ಬೆಂಗಳೂರು, ಇವರ ಮಾಹಿತಿಗಾಗಿ ಸಲ್ಲಿಸಿದೆ.

2020.04.17 13:38
vivo V17
48MP AI Quad Camera

6. ಜಿಲ್ಲಾ ಆರೋಗ್ಯ ಮತ್ತು ಕು.ಕ.ಅಧಿಕಾರಿಗಳು ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ತಂಬಾಕು ನಿಯಂತ್ರಣ ಘಟಕ, ಚಿತ್ರದುರ್ಗ, ಇವರ ಮಾಹಿತಿಗಾಗಿ.
7. ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿಗಳು, ಚಿತ್ರದುರ್ಗ ಇವರ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ.
8. ಜಿಲ್ಲಾ ಆಹಾರ ಸುರಕ್ಷತಾಧಿಕಾರಿಗಳು, ಚಿತ್ರದುರ್ಗ ಇವರ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ.
9. ಜಿಲ್ಲಾ ಶಸ್ತ್ರ ಚಿಕಿತ್ಸಕರು, ಜಿಲ್ಲಾ ಸಾರ್ವಜನಿಕ ಆಸ್ಪತ್ರೆ, ಚಿತ್ರದುರ್ಗ, ಇವರ ಮಾಹಿತಿಗಾಗಿ.
10. ಜಿಲ್ಲಾ ವಾರ್ತಾ ಮತ್ತು ಪ್ರಚಾರಾಧಿಕಾರಿಗಳು, ಚಿತ್ರದುರ್ಗ. ಇವರ ಮಾಹಿತಿ ಮತ್ತು ಪ್ರಕಟಣೆಗಾಗಿ.
11. ತಹಸೀಲ್ದಾರರು, ಚಿತ್ರದುರ್ಗ, ಹೊಳಲ್ಕೆರೆ, ಮೊಳಕಾಲ್ಮೂರು, ಹೊಸದುರ್ಗ, ಚಳ್ಳಕೆರೆ, ಹಿರಿಯೂರು, ಇವರ ಮುಂದಿನ ಕ್ರಮಕ್ಕಾಗಿ.
12. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಚಿತ್ರದುರ್ಗ, ಹೊಳಲ್ಕೆರೆ, ಮೊಳಕಾಲ್ಮೂರು, ಹೊಸದುರ್ಗ, ಚಳ್ಳಕೆರೆ, ಹಿರಿಯೂರು, ಇವರ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.
13. ಜಿಲ್ಲಾ ವಾಣಿಜ್ಯ ತೆರಿಗೆ ಅಧಿಕಾರಿಗಳು, ಚಿತ್ರದುರ್ಗ, ಇವರ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.
14. ಪೌರಾಯುಕ್ತರು, ನಗರಸಭೆ, ಚಿತ್ರದುರ್ಗ, ಚಳ್ಳಕೆರೆ, ಹಿರಿಯೂರು, ಇವರ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.
15. ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯಿತಿ, ಹೊಳಲ್ಕೆರೆ, ಮೊಳಕಾಲ್ಮೂರು, ಹೊಸದುರ್ಗ, ನಾಯಕನಹಟ್ಟಿ, ಇವರ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.
16. ತಾಲ್ಲೂಕು ಆರೋಗ್ಯಾಧಿಕಾರಿಗಳು, ಚಿತ್ರದುರ್ಗ, ಹೊಳಲ್ಕೆರೆ, ಚಳ್ಳಕೆರೆ, ಹೊಸದುರ್ಗ, ಹಿರಿಯೂರು ಹಾಗೂ ಮೊಳಕಾಲ್ಮೂರು ಇವರ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು,
ಜಿಲ್ಲಾ ತಂಬಾಕು ನಿಯಂತ್ರಣ ಸಮನ್ವಯ ಸಮಿತಿ,
ಚಿತ್ರದುರ್ಗ.

D.S.O.

vivo V17
48MP AI Quad Camera